ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
&
ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ     ದಿನಾಂಕ : DATE : 05/08/2020

# ತನಿಖೆಗೆ ನಿರ್ಧಾರ

ಬೆಂಗಳೂರು: ಕೊರೊನಾ ನಿಯಂತ್ರಣದ ಹೆಸರಿನಲ್ಲಿ ರಾಜ್ಯ ಸರ್ಕಾರ ಖರೀದಿಸಿರುವ ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ ಆಗಿದೆ ಎನ್ನಲಾದ ಅವ್ಯವಹಾರ ಕುರಿತು ಲೆಕ್ಕ ಪರಿಶೋಧಕರ ಮೂಲಕ ವಿಶೇಷ ತನಿಖೆ ನಡೆಸಲು ಸಾರ್ವಜನಿಕ ಲೆಕ್ಕ ಪತ್ರ ಸಮಿತಿ ನಿರ್ಧರಿಸಿದೆ ಎಂದು ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಸಮಿತಿ ಸಭೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಕೋವಿಡ್ ಔಷಧ, ಉಪಕರಣ ಖರೀದಿ ಸಂಬಂಧ ಸಮಗ್ರವಾಗಿ ಎಲ್ಲಾ ಹಣಕಾಸಿನ ಖರ್ಚು-ವೆಚ್ಚಗಳ ಬಗ್ಗೆ ಅಕೌಂಟೆಂಟ್ ಜನರಲ್ ಅವರಿಂದ ವಿಶೇಷ ಆಡಿಟ್‌ಗೆ ತೀರ್ಮಾನಿಸಲಾಗಿದೆ. ತಿಂಗಳಲ್ಲಿ ಲೆಕ್ಕ ಪತ್ರ ಸಮಿತಿಗೆ ವರದಿ ನೀಡುವಂತೆ ಸೂಚಿಸಲಾಗುವುದು ಎಂದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನೀಡಿರುವ ವರದಿಯ ಬಳಿಕ ಹಲವಾರು ಉಪಪ್ರಶ್ನೆಗಳು ಹುಟ್ಟಿಕೊಂಡಿವೆ. ಸ್ಪಷ್ಟೀಕರಣಗಳು, ಸಂಶಯಗಳ ಸಂಬಂಧ ಇನ್ನಷ್ಟು ಮಾಹಿತಿ ಕೇಳಿದ್ದೇವೆ ಎಂದು ಹೇಳಿದರು.